ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

04 (08) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲು ನಿಗದಿಪಡಿಸಿರುವ ಮಾನದಂಡಗಳೇನು; ಸಮುದಾಯ ಆರೋಗ್ಯ ಕೇಂದ್ರಗಳಿಗೆ ಯಾವ ಯಾವ ಸೌಲಭ್ಯಗಳನ್ನು ಒದಗಿಸಲಾಗುವುದು;

(ಆ) ಹಾಸನ ಜಿಲ್ಲೆಯಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲು ಅರ್ಹತೆ ಪಡೆದುಕೊಂಡಿವೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಆ ಪೈಕಿ ಕಳೆದ 5 ವರ್ಷಗಳಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಹಾಸನ ಜಿಲ್ಲೆಗೆ ಎಷ್ಟು ಪ್ರಮಾಣದ ಕೋವಿಡ್ ಲಸಿಕೆ ಅವಶ್ಯಕತೆ ಇದೆ; ಹಾಗೂ ಎಷ್ಟು ಪ್ರಮಾಣದ ಕೋವಿಡ್ ಲಸಿಕೆ ಸರಬರಾಜು ಮಾಡಲು ಉದ್ದೇಶಿಸಲಾಗಿದೆ? (ವಿವರ ನೀಡುವುದು)